# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ

E-mail : kannadapostnews@gmail.com / ಕನ್ನಡ post

Price: ₹1

Vol.No.01 | Issue. 312 | Pages. 2 | Date: 07-11-2025, FRIDAY

RNI NO: KARKAN/2024/89601

Kannada Daily

ಸಂಪುಟ : 01 – ಸಂಚಿಕೆ : 312 – ಪುಟಗಳು : 2 07-11-2025 ಶುಕ್ರವಾರ

Ph: 8762954248

ದರ : ₹1


# ಬೆಳಗಾವಿಯಲ್ಲಿ ರೈತರ ತೀವ್ರ ಪ್ರತಿಭಟನೆ

## ಇಂದು ರೈತ ಮುಖಂಡರೊಂದಿಗೆ ಸಿದ್ದರಾಮಯ್ಯ ಸಭೆ: ಪ್ರಧಾನಿ ಭೇಟಿಗೂ ನಿರ್ಧಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೆಂಗಳೂರು: ಕಬ್ಬಿಗೆ ಬೆಂಬಲ ಬೆಲೆ ನಿಗದಿಗೆ ಆಗ್ರಹಿಸಿ ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರು ನಡೆಸುತ್ತಿರುವ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದು, ಗುರುವಾರ 8ನೇ ದಿನಕ್ಕೆ ಕಾಲಿಟ್ಟಿದೆ.

ಈ ಮಧ್ಯೆ ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕಬ್ಬು ಬೆಳೆಗಾರರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಲಾಗಿದೆ.

ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಬೆಳಗಾವಿಯಲ್ಲಿ ರೈತರ ಪ್ರತಿಭಟನೆ ಬಗ್ಗೆ ಸುದೀರ್ಘವಾಗಿ ಚರ್ಚೆ ಆಗಿದೆ. ಸಂಪುಟ ಸಭೆಗೂ ಮೊದಲು ಎಂಬಿ ಪಾಟೀಲ್ ಹಾಗೂ ಎಚ್ ಕೆ ಪಾಟೀಲ್ ಅವರಿಗೆ ರೈತರ ಜೊತೆಗೆ ಮಾತುಕತೆ ನಡೆಸಲು ಸೂಚಿಸಿದ್ದೆ. ಇಬ್ಬರು ಹೋಗಿ ಮಾತುಕತೆ ನಡೆಸಿದ್ದಾರೆ ಎಂದು ವಿವರಿಸಿದರು.

ನಮ್ಮದು ರೈತರ ಪರವಾದ ಸರ್ಕಾರ. ಹೀಗಾಗಿ ರೈತರ ಪ್ರತಿಭಟನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಕ್ಕರೆ ಕಾರ್ಖಾನೆ ಮಾಲೀಕರಾಗಿದ್ದರಿಂದ ಅವರು ಪ್ರತಿಭಟನಾ ಸ್ಥಳಕ್ಕೆ ಹೋಗಿಲ್ಲ. ಬದಲಾಗಿ ಜಿಲ್ಲಾಧಿಕಾರಿ ಹಾಗೂ ಎಸ್ ಪಿ ಅವರು ಸ್ಥಳಕ್ಕೆ ಹೋಗಿ ರೈತರ ಜೊತೆಗೆ ಮಾತುಕತೆ ನಡೆಸಿದ್ದಾರೆ ಎಂದರು.

ಕಬ್ಬಿಗೆ ಎಫ್ ಆರ್ ಪಿ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಈ ವರ್ಷವೂ ಕಳೆದ ಮೇ 6 ರಂದು ಎಫ್ ಆರ್ ಪಿ ನಿಗದಿ ಮಾಡಲಾಗಿದೆ. 25-26 ನೇ ಸಾಲಿನಲ್ಲಿ 10.25 ಇಳುವರಿಗೆ 3550 ಪ್ರತಿ ಟನ್ ಗೆ ನಿಗದಿ ಮಾಡಲಾಗಿದೆ.



ಇದರಲ್ಲಿ ಸಾರಿಗೆ, ಕಟಾವು ಒಳಗೊಂಡಿದೆ. ಇಳುವರಿ 9.5 ಕ್ಕಿಂತ ಕಡಿಮೆ ಇದ್ದರೆ 3290.50 ಕೊಡಬೇಕು ಎಂದು ಕೇಂದ್ರ ತೀರ್ಮಾನ ಮಾಡದೆ ಎಂದು ವಿವರ ನೀಡಿದರು.

ನಂತರ ಮಧ್ಯಾಹ್ನ 1.30 ಕ್ಕೆ ರೈತ ಮುಖಂಡರ ಸಭೆಯನ್ನು ಕರೆಯಲಾಗಿದೆ. ಪ್ರತಿಭಟನೆ ನಡೆಯುತ್ತಿರುವ ಜಿಲ್ಲೆಯ ರೈತ ಮುಖಂಡರನ್ನೂ ಸಭೆಗೆ ಆಹ್ವಾನಿಸಲಾಗಿದೆ. ಸಭೆಯ ನಂತರ ಪ್ರಧಾನಿ ಮೋದಿಗೆ ಪತ್ರ ಬರೆಯುತ್ತೇನೆ. ಭೇಟಿಗೆ ಅವಕಾಶ ಕೊಡಬೇಕು ಎಂದು ಕೋರುತ್ತೇನೆ. ಸಮಯ ನೀಡಿದರೆ ಪ್ರಧಾನಿಯನ್ನು ನೇರವಾಗಿ ಭೇಟಿ ಮಾಡಿ ಅವರಿಗೆ ರೈತರ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಿ ಚರ್ಚಿಸುತ್ತೇನೆ ಎಂದರು.

ಕಳೆದ ವರ್ಷ ಇಡೀ ದೇಶಕ್ಕೆ ಕೇವಲ 10 ಲಕ್ಷ ಮೆಟ್ರಿಕ್ ಟನ್ ರಫ್ತು ಮಾಡಲು ಮಾತ್ರ ಅವಕಾಶ ನೀಡಲಾಗಿತ್ತು. ಆದರೆ ಕರ್ನಾಟಕಮೊಂದರಲ್ಲೆ 41 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆಯಾಗಿತ್ತು. ಈ ಕಾರಣದಿಂದಲೂ ರೈತರಿಗೆ ಸಮಸ್ಯೆಯಾಗುತ್ತಿದೆ. ಎಥೆನಾಲ್ ವಿಚಾರದಲ್ಲೂ ಸಹ ಕೇಂದ್ರ ಸರ್ಕಾರವು ತಾರತಮ್ಯ ಧೋರಣೆಯನ್ನು ಅನುಸರಿಸುತ್ತಿದೆ ಎಂದರು.

ಕರ್ನಾಟಕದಲ್ಲಿ 270 ಕೋಟಿ ಲೀಟರ್ ಎಥೆನಾಲ್ ಉತ್ಪಾದನಾ ಸಾಮರ್ಥ್ಯ ಇದ್ದರೂ ಸಹ 2024-25 ರಲ್ಲಿ 47 ಕೋಟಿ ಲೀಟರ್‌ಗಳನ್ನು ತೈಲ ಕಂಪನಿಗಳಿಗೆ ಖರೀದಿ ಮಾಡಲು ಹಂಚಿಕೆ ಮಾಡಲಾಗಿದೆ. ಇದು ಕೇಂದ್ರವು ಕರ್ನಾಟಕದ ರೈತರೊಂದಿಗೆ ಆಡುತ್ತಿರುವ ಆಟಕ್ಕೆ ಸ್ಪಷ್ಟ ಉದಾಹರಣೆಯಾಗಿದೆ ಎಂದು ಮುಖ್ಯಮಂತ್ರಿ ಆರೋಪಿಸಿದರು.

ರಾಜ್ಯ ಸರ್ಕಾರವು 11 ಸ್ಥಳಗಳಲ್ಲಿ ಭೌತಿಕ ತೂಕದ ಯಂತ್ರಗಳನ್ನು ಸ್ಥಾಪಿಸಲು ನಿರ್ಧರಿಸಿದೆ ಮತ್ತು ಎಂಟು ಸ್ಥಳಗಳಿಗೆ ಟೆಂಡರ್‌ಗಳನ್ನು ಕರೆದಿದೆ. ಇದಲ್ಲದೆ, ಅಳತೆ, ಕೊಯ್ಲು ಮತ್ತು ಬಿಲ್ಲಿಂಗ್ ಪರೀಕ್ಷೆಗಾಗಿ ಸಮಿತಿಯನ್ನು ರಚಿಸಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

ರೈತರ ಮುಗ್ಧತೆಯನ್ನು ವಿರೋಧ ಪಕ್ಷದವರು ರಾಜಕಾರಣಕ್ಕೆ ಬಳಸಿಕೊಳ್ಳುತ್ತಿದ್ದಾರೆ. ರೈತರು ಯಾವುದೇ ಕಾರಣಕ್ಕೂ ರೈತ ದ್ರೋಹಿಯಾದ ಬಿಜೆಪಿಯವರ ಮರಳು ಮಾತುಗಳಿಗೆ ಬಲಿಯಾಗಬಾರದು. ನಮ್ಮ ಸರ್ಕಾರವು ಮಾತುಕತೆಯಲ್ಲಿ ಮತ್ತು ಪ್ರಜಾಪ್ರಭುತ್ವದ ಪ್ರಕ್ರಿಯೆಗಳಲ್ಲಿ ನಂಬಿಕೆ ಇಟ್ಟುಕೊಂಡಿದೆ ಮತ್ತು ನಿರಂತರವಾಗಿ ರೈತ ಪರವಾದ ತೀರ್ಮಾನಗಳನ್ನು ಕೈಗೊಳ್ಳುತ್ತಾ ಬಂದಿದೆ ಎಂದರು.

## ಶಾಲಾ, ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ



ಆಲೂರು: ತಾಲೂಕಿನ ಸರ್ಕಾರಿ ಪ್ರಾಥಮಿಕ ಶಾಲಾ ಕಟ್ಟಡ ನಿರ್ಮಾಣಕ್ಕೆ ಬುಧವಾರ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಅಬ್ಬನ ಗ್ರಾಮ ಪಂಚಾಯತಿ ವ್ಯಾಪ್ತಿಯ ಜಿನಗರಹಳ್ಳಿ ಸರ್ಕಾರಿ ಪ್ರೌಢ ಶಾಲೆಗೆ ಹೆಚ್ಚುವರಿ ಕಟ್ಟಡ ಹಾಗೂ ಮಾರನಾಯಕನಹಳ್ಳಿ ಗ್ರಾಮದಲ್ಲಿ 20 ಲಕ್ಷ ರೂ. ವೆಚ್ಚದಲ್ಲಿ ನೂತನ ಅಂಗನವಾಡಿ ಕೇಂದ್ರ ನಿರ್ಮಾಣವಾಗಲಿದೆ. ಸರ್ಕಾರ ಸರ್ಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕು. ಸರ್ಕಾರಿ ಶಾಲೆಗಳ ಕಟ್ಟಡ ನಿರ್ಮಾಣ ಹಾಗೂ ದುರಸ್ತಿ ಕಾರ್ಯಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.

ಪ್ರಸಕ್ತ ತಾಲೂಕಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು ಗ್ರಾಮೀಣ ಪ್ರದೇಶದ ಹಲವು ಕಡೆಗಳಲ್ಲಿ ಸರ್ಕಾರಿ ಶಾಲೆಗಳ ಗೋಡೆ ಕುಸಿದು ಅವಘಡ ಸಂಭವಿಸಿದೆ. ಇದನ್ನ ಗಂಭೀರವಾಗಿ ಪರಿಗಣಿಸಿ ವರದಿ ತರಿಸಿಕೊಂಡು ಸೂಕ್ತ ಅನುದಾನ ಬಿಡುಗಡೆಗೊಳಿಸುವಂತೆ ಆಗ್ರಹಿಸಿದರು.

ಇಲ್ಲಿನ ಶಾಲೆಗೆ ನೂತನ ಕಟ್ಟಡ ನಿರ್ಮಾಣ ಮಾಡಲು ಸ್ಥಳೀಯರು ಹಾಗೂ ಎಸ್‌ಡಿಎಂಸಿ ಯವರ ಮನವಿ ಮೇರೆಗೆ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೃಷ್ಣೇಗೌಡ , ಪಂಚಾಯತ್ ರಾಜ್ ಇಲಾಖೆ ಇಂಜಿನಿಯರ್ ರಮೇಶ್, ಅಬ್ಬನ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮುಕ್ತಾಂಬಿಕ, ಗ್ರಾಪಂ ಸದಸ್ಯರಾದ ರವೀಂದ್ರ, ಮುಕ್ತರ ಪಾಷ, ಪೂರ್ಣಿಮಾ, ಬಿಜೆಪಿ ತಾಲೂಕು ಪ್ರಧಾನ ಕಾರ್ಯದರ್ಶಿ ಕೃಷ್ಣಮೂರ್ತಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಧನಂಜಯ, ಸಂಪತ್, ಚೇತನ್, ವಿರೂಪಾಕ್ಷ ಇತರರಿದ್ದರು.

## ಕಾರು ಡಿಕ್ಕಿಯಾಗಿ ವ್ಯಕ್ತಿ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಅಪರಿಚಿತ ಕಾರು ಡಿಕ್ಕಿಯಾಗಿ ಪಾದಚಾರಿ ಮೃತಪಟ್ಟಿರುವ ಘಟನೆ ರಾಷ್ಟ್ರೀಯ ಹೆದ್ದಾರಿ 75ರ ಮೇಟಿಕೆರೆ ಗೇಟ್ ಸಮೀಪ ನಡೆದಿದೆ.

ತಾಲ್ಲೂಕಿನ ಹಿರೀಸಾವೆ ನಿವಾಸಿ ರಾಧಾಕೃಷ್ಣ (69) ಮೃತರು. ರಾಷ್ಟ್ರೀಯ ಹೆದ್ದಾರಿ 75ರ ರಸ್ತೆಯಲ್ಲಿರುವ ಸಾರ್ವಜನಿಕ ಶೌಚಾಲಯದಲ್ಲಿ ಸ್ವಚ್ಛತಾ ಕೆಲಸ ಮಾಡಿಕೊಂಡಿದ್ದ ಅವರು ಕೆಲಸ ಮುಗಿಸಿ ಟೀ ಕುಡಿಯಲೆಂದು ರಸ್ತೆ ಬದಿ ನಡೆದು ಹೋಗುತ್ತಿದ್ದಾಗ ಬೆಂಗಳೂರು ಕಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮನೆ ಬೀಗ ಮುರಿದು ಕಳ್ಳತನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 1.26 ಲಕ್ಷ ರೂ. ಬೆಲೆಯ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಮಾರಿಗುಡಿಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಅಭಿ ಎಂಬುವವರು ನ. 3 ರಂದು ಮನೆಗೆ ಬೀಗ ಹಾಕಿ ಕುಟುಂಬ ಸಮೇತ ತೆರಳಿದ್ದರು. ಕೆಲಸ ಸಮಯದ ಬಳಿಕ ವಾಪಾಸ್ ಬಂದು ನೋಡಿದಾಗ ಮನೆ ಬಾಗಿಲು ಮುರಿದಿರುವುದು ತಿಳಿದಿದೆ. ಅಕ್ಕಿ ತುಂಬುವ ಡಬ್ಬದಲ್ಲಿಟ್ಟಿದ್ದ 8 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 6 ಗ್ರಾಂ ತೂಕದ ಒಂದು ಜೊತೆ ಚಿನ್ನದ ಜುಮುಕಿ, 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಮಾಟಿ, 4 ಗ್ರಾಂ ತೂಕದ ಚಿನ್ನದ ಗುಂಡು, 5 ಗ್ರಾಂ ತೂಕದ ಒಂದು ಚಿನ್ನದ ನಾಣ್ಯವನ್ನು ಕಳವು ಮಾಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಂಗ್ರೆಸ್ ಕಾನೂನು ಘಟಕ ಪದಾಧಿಕಾರಿಗಳ ಪದಗ್ರಹಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಕಾಂಗ್ರೆಸ್ ಕಾನೂನು ವಿಭಾಗದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಕಾಂಗ್ರೆಸ್ ಕಾನೂನು ವಿಭಾಗದ ಅಧ್ಯಕ್ಷರಾಗಿ ನಾಯಕರಹಳ್ಳಿ ಜಯರಾವ್, ಉಪಾಧ್ಯಕ್ಷರಾಗಿ ವಿಜಯಕುಮಾರ್, ಎಂ.ಡಿ.ಮಂಜು, ಕೆ.ಎಸ್.ಹರೀಶ್, ಪ್ರಧಾನ ಕಾರ್ಯದರ್ಶಿಯಾಗಿ ಕೆ.ಪ್ರಸನ್ನ, ಖಜಾಂಚಿಯಾಗಿ ಮೊಹಮ್ಮದ್ ಆರಿಫ್, ಜಂಟಿ ಕಾರ್ಯದರ್ಶಿಗಳಾಗಿ ಇಮ್ರಾನ್ ಪಾಷಾ, ಲಕ್ಷ್ಮಣ, ಯೋಗೇಶ್ ಗೌರವ್ ಮತ್ತು ಮೋಹನ್ ಕುಮಾರ್ ಅಧಿಕಾರ ಸ್ವೀಕರಿಸಿದರು.

ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ ಮಾತನಾಡಿ, ರಾಜ್ಯದಲ್ಲಿ ಸರ್ಕಾರ ನಮ್ಮದೇ ಇರುವುದರಿಂದ ಸಂಘಟನೆ ಬಲಪಡಿಸಿ ಮುಂಬರುವ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳು



ಗೆಲ್ಲುವಂತೆ ಕೆಲಸ ಮಾಡಬೇಕೆಂದು ಹೇಳಿದರು.

ಕಾನೂನು ವಿಭಾಗದ ಪದಾಧಿಕಾರಿಗಳು ಹೆಚ್ಚು ವಕೀಲರನ್ನು ಪಕ್ಷದತ್ತ ಸೆಳೆಯಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಸರ್ಕಾರದ ಕಲ್ಯಾಣ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸವಾಗಬೇಕೆಂದು ಕಿವಿಮಾತು ಹೇಳಿದರು. ಕೆಪಿಸಿಸಿ ಕಾನೂನು ವಿಭಾಗದ ಕಾರ್ಯಾಧ್ಯಕ್ಷ ಶ್ರೀನಿವಾಸ್ ಬಾಬು ಮಾತನಾಡಿ, ಸಂವಿಧಾನದ ಮೌಲ್ಯ ಮತ್ತು ಪ್ರಜಾಪ್ರಭುತ್ವದ ತತ್ವಗಳನ್ನು ವಕೀಲರು ತಮ್ಮ ಕೆಲಸದ ಮೂಲಕ ಕಾಪಾಡಬೇಕೆಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಇ.ಹೆಚ್. ಲಕ್ಷ್ಮಣ್ ಮಾತನಾಡಿ, ಕಾನೂನು ವಿಭಾಗವು ಕಾನೂನು, ಮಾನವ ಹಕ್ಕು ಹಾಗು ಮಾಹಿತಿ ಹಕ್ಕು ಒಳಗೊಂಡಿದೆ. ಈ ಘಟಕದ ಕಾರ್ಯಕರ್ತರು ಎಚ್ಚರಿಕೆಯಿಂದ ಮತ್ತು ನಿಷ್ಠೆಯಿಂದ ಕೆಲಸ ಮಾಡಬೇಕು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಎಸ್.ಲೋಕೇಶ್ ಮಾತನಾಡಿ, ಎಲ್ಲರೂ ಕಾನೂನು ಅರಿವು ಹೊಂದುವ ಮೂಲಕ ಸಮಸಮಾಜ ನಿರ್ಮಾಣಕ್ಕೆ ಪಣ ತೊಡಬೇಕು. ಜಿಲ್ಲೆಯಲ್ಲಿ ಕಾನೂನು ವಿಭಾಗದ ಸಂಘಟನೆಯನ್ನು ಬಲಪಡಿಸಿ, ವಕೀಲರಿಗೆ ರಾಜಕೀಯ ಜಾಗೃತಿ ಮೂಡಿಸುವ ಕೆಲಸವಾಗಬೇಕಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಶಕ್ತಿ ಬಲಪಡಿಸುವ ನಿಟ್ಟಿನಲ್ಲಿ ಎಲ್ಲರೂ ಶಕ್ತಿಮೀರಿ ಕೆಲಸ ಮಾಡಬೇಕಿದೆ. ಸಂವಿಧಾನ ರಕ್ಷಣೆ ಯುವಕರ ಕೈಯಲ್ಲಿದೆ ಎಂದರು.

ಕೆಪಿಸಿಸಿ ರಾಜ್ಯ ಜಂಟಿ ಕಾರ್ಯದರ್ಶಿ ಖಲಂದರ್ ಕೊಯ್ಲ್, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ದೇವರಾಜೇಗೌಡ, ಸುಳ್ಯ ಕ್ಷೇತ್ರದ ಮುಖಂಡ ಜಿಗಣಿ ಕೃಷ್ಣಪ್ಪ, ಎಸ್.ಸಿ. ಘಟಕದ ಮಾಜಿ ಅಧ್ಯಕ್ಷ ಡಾ. ಮುನಿಸ್ವಾಮಿ, ಹಾಲಿ ಅಧ್ಯಕ್ಷ ಮಲ್ಲಿಗೆವಾಳು ದೇವಪ್ಪ, ಕಾನೂನು ವಿಭಾಗದ ಮಾಜಿ ಅಧ್ಯಕ್ಷ ಡಿ.ಟಿ.ಪ್ರಸನ್ನ, ದುದ್ದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ವಿಶ್ವನಾಥ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಚ್.ಆರ್.ಒಂಬೇಶ್ ಇತರರಿದ್ದರು.

## ಸಪ್ನ ಬುಕ್ ಹೌಸ್‌ನಿಂದ ರಿಯಾಯಿತಿ ದರದಲ್ಲಿ ಪುಸ್ತಕ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕನ್ನಡ ರಾಜ್ಯೋತ್ಸವ ಅಂಗವಾಗಿ ದೇಶದ ಪ್ರತಿಷ್ಠಿತ ಪುಸ್ತಕ ಭಂಡಾರಗಳಲ್ಲಿ ಒಂದಾದ ಸಪ್ನ ಬುಕ್ ಹೌಸ್ ನವೆಂಬರ್ ತಿಂಗಳಲ್ಲಿ ಕನ್ನಡ ಪುಸ್ತಕಗಳಿಗೆ ಶೇ. 10 ರಿಂದ 50ರ ವರೆಗೆ ರಿಯಾಯಿತಿ ಘೋಷಿಸಿದೆ.

ಹಾಸನ ಸೇರಿ ದೇಶಾದ್ಯಂತ 24 ಶಾಖೆಗಳನ್ನು ಸಪ್ನ ಒಳಗೊಂಡಿದೆ. ಕನ್ನಡ ಪುಸ್ತಕಗಳಿಗೆ ರಿಯಾಯಿತಿ ಘೋಷಿಸಿರುವುದು ಮಾತ್ರವಲ್ಲದೆ 500 ರೂ.ಗಿಂತ ಹೆಚ್ಚು ಮೌಲ್ಯದ ಪುಸ್ತಕ ಖರೀದಿಸಿದರೆ ಸದಸ್ಯತ್ವ ಕಾರ್ಡ್ ನೀಡುತ್ತಿದ್ದು ಅದರ ನೆರವಿನಿಂದ ಮುಂದಿನ ದಿನಗಳಲ್ಲಿ ಎಲ್ಲಾ ಪುಸ್ತಕಗಳಿಗೆ ಶೇ. 10 ರಷ್ಟು ರಿಯಾಯಿತಿ ಪಡೆಯಬಹುದು. ಜೊತೆಗೆ ಕಾಂಬೋ ಆಫರ್, ಒಂದು ಪುಸ್ತಕ ಖರೀದಿಸಿದರೆ ಮತ್ತೊಂದು ಪುಸ್ತಕ ಉಚಿತವಾಗಿ ನೀಡಲಾಗುತ್ತಿದೆ. ಪುಸ್ತಕ ಪ್ರೇಮಿಗಳು ಇದರ ಸದುಪಯೋಗ ಪಡೆಯಬೇಕೆಂದು ಸಪ್ನ ಬುಕ್‌ಹೌಸ್‌ನ ವ್ಯವಸ್ಥಾಪಕ ನಿರ್ದೇಶಕ ನಿತಿನ್ ಷಾ ಕೋರಿದ್ದಾರೆ.

## ಕಾರು ಡಿಕ್ಕಿಯಾಗಿ ಮಹಿಳೆ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ರಸ್ತೆ ದಾಟುತ್ತಿದ್ದಾಗ ಏಕಾಏಕಿ ಬಂದ ಕಾರು ಡಿಕ್ಕಿಯಾಗಿ ಮಹಿಳೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಗಂಡಸಿ ಹ್ಯಾಂಡ್ ಪೋಸ್ಟ್‌ನಲ್ಲಿ ನಡೆದಿದೆ.

ಗಂಡಸಿ ಗ್ರಾಮದ ಷಹಿನಾಬಿ (50) ಮೃತರು. ಅನಾರೋಗ್ಯ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ತೋರಿಸಲು ಹಾಸನಕ್ಕೆ ಬಂದಿದ್ದ ಊರಿಗೆ ವಾಪಸ್ ಹೋಗುತ್ತಿದ್ದಾಗ ಘಟನೆ ನಡೆದಿದೆ. ತಮ್ಮ ಊರಿನ ಬಸ್ ಹತ್ತಲು ಗಂಡಸಿ ಹ್ಯಾಂಡ್‌ಪೋಸ್ಟ್‌ನಲ್ಲಿ ನಡೆದುಕೊಂಡು ಬರುತ್ತಿದ್ದಾಗ ಚನ್ನರಾಯಪಟ್ಟಣ ಕಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ತೀವ್ರ ರಕ್ತಸ್ರಾವವಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಬ್ಬಳಿ ಶ್ರೀ ಬಸವೇಶ್ವರ ಸ್ವಾಮಿ ಜಾತ್ರೆ ಸಂಪನ್ನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀಕ್ಷೇತ್ರ ಕಬ್ಬಳಿ ಶ್ರೀ ಬಸವೇಶ್ವರ ಸ್ವಾಮಿ ಜಾತ್ರೆ ಧಾರ್ಮಿಕ ಕೈಂಕರ್ಯಗಳೊಂದಿಗೆ ಸಂಪನ್ನಗೊಂಡಿತು.

ಉತ್ಸವ ಮೂರ್ತಿಗೆ ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಪೂಜೆ ಸಲ್ಲಿಸಿ ಮೂಲ ಸ್ಥಾನದಿಂದ ಗ್ರಾಮಕ್ಕೆ ಕಳಿಸಿಕೊಡುವ ಮೂಲಕ ಜಾತ್ರೆಗೆ ವಿಧ್ಯುಕ್ತ ತೆರೆ ಎಳೆದರು.

ಬುಧವಾರ ಬೆಳಿಗ್ಗೆಯಿಂದ ಸಂಜೆ ವರೆಗೆ ಬಸವೇಶ್ವರಸ್ವಾಮಿಯ ಮೂಲ ಮೂರ್ತಿಗೆ ವಿಶೇಷ ಪೂಜೆ, ನಾಗರ ದೇವತೆಗಳಿಗೆ ಪುಷ್ಪಾರ್ಚನೆ, ದೇಗುಲದ ಹಿಂಭಾಗದಲ್ಲಿರುವ ಇಷ್ಟಾರ್ಥ ಸಿದ್ಧಿ ಬಸವ ಮೂರ್ತಿಗೆ ಕ್ಷೀರಾಭಿಷೇಕ, ಗೋ ಪೂಜೆ ನೆರವೇರಿಸಿದರು.

ನಂತರ ದೇಗುಲದ ಮುಂಭಾಗದ ಗರುಡ ಕಂಬದ ಮೇಲಿರುವ ದೀಪ



ಬೆಳಗಿಸಲಾಯಿತು. ಸ್ವಾಮೀಜಿ ಧರ್ಮಧ್ವಜವನ್ನು ಕೆಳಕ್ಕೆ ಇಳಿಸುವ ಮೂಲಕ ಜಾತ್ರಾ ಮಹೋತ್ಸವಕ್ಕೆ ತೆರೆ ಎಳೆದರು.

ಭಕ್ತರು ಉತ್ಸವ ಮೂರ್ತಿಯನ್ನು ಮೂಲಸ್ಥಾನದಿಂದ ಕಬ್ಬಳಿ ಗ್ರಾಮಕ್ಕೆ ಮೆರವಣಿಗೆಯಲ್ಲಿ ಕರೆತಂದು ಗುಡಿ ತುಂಬಿಸಿದರು. ಕಬ್ಬಳಿ ಮಠದ ಶಿವಪುತ್ರನಾಥ ಸ್ವಾಮೀಜಿ, ಆದಿಚುಂಚನಗಿರಿ ಶಿಕ್ಷಣ ಸಂಸ್ಥೆಯ ಸಿಬ್ಬಂದಿ, ಕಬ್ಬಳಿ ಹಾಗೂ ಸುತ್ತಮುತ್ತಲ ಗ್ರಾಮಗಳ ಭಕ್ತರು ಭಾಗವಹಿಸಿದ್ದರು.

ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ತೆಪ್ಪೋತ್ಸವ, ಸರ್ಪೋತ್ಸವ, ಸಾಮೂಹಿಕ ವಿವಾಹ, ಧಾರ್ಮಿಕ ಸಭೆಗಳು ಸೇರಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಕಳೆದ ಐದು ದಿನಗಳ ವರೆಗೆ ನಡೆದವು. ರೈತರು ರಾಸುಗಳ ಮೈಮೇಲೆ ತೀರ್ಥ ಹಾಕಿಸಿದರು. ಪ್ರತಿ ನಿತ್ಯ ಸಾವಿರಾರು ಭಕ್ತರು ದೇವರ ದರ್ಶನ ಪಡೆದರು. ಶ್ರೀಕ್ಷೇತ್ರ ಕಬ್ಬಳಿ ಶಾಖಾ ಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ, ಗುಡಿಗೌಡ ಪ್ರಕಾಶ್, ಸುತ್ತಮುತ್ತಲ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ನ. 9ಕ್ಕೆ ಬುಕ್ ಮಾತು ಕಾರ್ಯಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಅಕ್ಷರ ಬುಕ್ ಹೌಸ್ ಪ್ರಸ್ತುತಪಡಿಸುವ ಬುಕ್ ಮಾತು ಕಾರ್ಯಕ್ರಮ ನ. 9ರ ಭಾನುವಾರ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆಯಲಿದೆ.

ಲೇಖಕ ಗಜಾನನ ಶರ್ಮ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಅಂದು ಬೆಳಿಗ್ಗೆ 10.30ಕ್ಕೆ ಕಾರ್ಯಕ್ರಮ ಜರುಗಲಿದ್ದು ಗಜಾನನ ಶರ್ಮ ಅವರ ಚೆನ್ನಭೈರಾದೇವಿ ಕಾದಂಬರಿ ಕುರಿತು ಮಾತುಕತೆ ನಡೆಯಲಿದೆ. ಶ್ರೀಯುತರು ಪುನರ್ವಸು, ಕೆಂಪನಂಜಮ್ಮಣ್ಣಿ, ಚೆನ್ನಭೈರಾದೇವಿ ಮೊದಲಾದ ಕಾದಂಬರಿ ರಚಿಸಿದ್ದಾರೆ. ಇದೇ ಶನಿವಾರ ಅವರು ಇತ್ತೀಚಿಗೆ ರಚಿಸಿರುವ ಕರೆಂಟಿನ ಕಥೆ ಪುಸ್ತಕವು ಬೆಂಗಳೂರಿನಲ್ಲಿ ಬಿಡುಗಡೆಯಾಗುತ್ತಿದೆ.

## ಆಕಸ್ಮಿಕ ಬೆಂಕಿ ಅವಘಡ ತಪ್ಪಿಸುವ ಪ್ರಾತ್ಯಕ್ಷಿಕೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಆಕಸ್ಮಿಕವಾಗಿ ಬೆಂಕಿ ಅವಘಡಗಳು ಸಂಭವಿಸಿದಾಗ ನಾಗರಿಕರು ತಕ್ಷಣ ತೆಗೆದುಕೊಳ್ಳಬೇಕಾದ ಎಚ್ಚರಿಕೆಗಳು ಮತ್ತು ನಂದಿಸುವ ಕ್ರಮದ ಬಗ್ಗೆ ಚನ್ನರಾಯಪಟ್ಟಣ ಅಗ್ನಿ ಶಾಮಕ ಠಾಣೆಯ ಸಿಬ್ಬಂದಿ ಗುರುವಾರ ಹಿರೀಸಾವೆಯ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪಿಎಂಶ್ರೀ ಶಾಸಕರ ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ರಾತ್ಯಕ್ಷಿಕೆ ನಡೆಸಿಕೊಟ್ಟರು.

ಕಚೇರಿಯಲ್ಲಿ ಯಂತ್ರೋಪಕರಣಗಳಿಗೆ ಬೆಂಕಿ ಹೊತ್ತಿಕೊಂಡಾಗ ಅಗ್ನಿ ನೊಂದಕಗಳನ್ನು ಬಳಸಿ ಬೆಂಕಿಯನ್ನು ನಂದಿಸುವ ಬಗ್ಗೆ ಮತ್ತು ಮನೆಯಲ್ಲಿ ಎಲ್‌ಪಿಜಿ ಗ್ಯಾಸ್, ವಿದ್ಯುತ್‌ನಿಂದ ಆಕಸ್ಮಿಕ ಬೆಂಕಿ ಉಂಟಾದರೆ ಹೇಗೆ ನಂದಿಸಬಹುದು ಹಾಗೂ ಮನೆಯ ಹೊರಭಾಗದಲ್ಲಿ ಉಂಟಾದ ಬೆಂಕಿ ಅವಘಡಗಳನ್ನು ನಂದಿಸಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಪ್ರಾಯೋಗಿಕವಾಗಿ ಮಾಹಿತಿ ನೀಡಿದರು.

ಚನ್ನರಾಯಪಟ್ಟಣ ಅಗ್ನಿ ಶಾಮಕ ಠಾಣೆಯ ಸಹಾಯಕ ಠಾಣಾಧಿಕಾರಿ ಕೆ.ಹೆಚ್. ಪುಟ್ಟಸ್ವಾಮಿ ನೇತೃತ್ವದಲ್ಲಿ ಸಿಬ್ಬಂದಿ ಜಗದೀಶ್, ಕುಮಾರ್, ಶಿವಾನಂದ ವಡೇರಾ, ಗಂಗಾಧರ್, ಯೋಗಾನಂದ ಅವರು ಅಗ್ನಿ ಅವಘಡ ನಿಯಂತ್ರಣದ ಬಗ್ಗೆ ಜಾಗೃತಿ ಕಾರ್ಯಕ್ರಮ ನಡೆಸಿಕೊಟ್ಟರು.

## ಮೆಹಬೂಬ್ ಷರೀಫ್ ಅರೇಹಳ್ಳಿ ಗ್ರಾಪಂ ಉಪಾಧ್ಯಕ್ಷ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ತಾಲ್ಲೂಕಿನ ಅರೇಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯರಾಗಿ ಮೆಹಬೂಬ್ ಷರೀಫ್ ಆಯ್ಕೆಯಾಗಿದ್ದಾರೆ.

ಪದ್ಮ ಮಂಜುನಾಥ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಮೆಹಬೂಬ್ ಹಾಗೂ ಫರ್ಹಾನಾ ಬಾನು ನಾಮಪತ್ರ ಸಲ್ಲಿಸಿದ್ದರು.

ಗುರುವಾರ ನಡೆದ ಚುನಾವಣೆಯಲ್ಲಿ ಒಟ್ಟು 22 ಮತಗಳ ಪೈಕಿ ಮೆಹಬೂಬ್ ಷರೀಫ್ 12 ಮತ ಪಡೆದು ಜಯಶೀಲರಾದರೆ ಫರ್ಹಾನಾ ಬಾನು 10 ಮತ ಗಳಿಸಿ ಪರಾಭವಗೊಂಡರು.



ಮೆಹಬೂಬ್ ಷರೀಫ್ ಅವರನ್ನು ಗ್ರಾ.ಪಂ. ಸದಸ್ಯರು, ಗ್ರಾಮಸ್ಥರು ಅಭಿನಂದಿಸಿದರು.

ಚುನಾವಣಾಧಿಕಾರಿ ಸತೀಶ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಚಂದ್ರಯ್ಯ, ಗ್ರಾ.ಪಂ. ಸದಸ್ಯರಾದ ವೀರೇಶ್, ಶಶಿ ಕುಮಾರ್, ಲಕ್ಷ್ಮಣ್, ಸಂಗಪ್ಪ, ಅಣ್ಣಪ್ಪ, ಮುನೀರಾ, ಪಾರ್ವತಿ, ಗ್ರಾಮಸ್ಥರಾದ ಗಂಗಾಧರ್, ಮುಜೀಬ್, ಅನಿಲ್, ಸಿದ್ದೇಶ್, ಅಣ್ಣಪ್ಪ, ಅಕ್ಬರ್ ಅಲಿ ಇತರರಿದ್ದರು.

## 4 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಮಹಿಳೆ ಗಮನಕ್ಕೆ ಬಾರದಂತೆ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಅಂದಾಜು 35 ಗ್ರಾಂ ತೂಕದ ಚಿನ್ನಾಭರಣ ಕದ್ದಿರುವ ಘಟನೆ ಬೆಂಗಳೂರಿನಿಂದ ಚನ್ನರಾಯಪಟ್ಟಣಕ್ಕೆ ಬರುತ್ತಿದ್ದ ಬಸ್‌ನಲ್ಲಿ ನಡೆದಿದೆ.

ಪಟ್ಟಣದ ಉದಯಗಿರಿ ಬಡಾವಣೆ ನಿವಾಸಿ ಚೇತನ ಎಂಬುವರ ಆಭರಣ ಕಳುವಾಗಿದೆ. ಬೆಂಗಳೂರಿನಲ್ಲಿ ವಾಸವಿರುವ ಅವರು ನ. 1ರಂದು ಕುಟುಂಬಸ್ಥರೊಂದಿಗೆ ತಾಯಿಯ ಮನೆಯಾದ ಚನ್ನರಾಯಪಟ್ಟಣಕ್ಕೆ ಬರುತ್ತಿದ್ದರು. 4 ಲಕ್ಷ ರೂ. ಬೆಲೆಯ 35 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ, ಬೆಳ್ಳಿ ಕೈಬಳೆಯನ್ನು ಗಮನಕ್ಕೆ ಬಾರದಂತೆ ಕದ್ದಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ತಾಲ್ಲೂಕು ಮಟ್ಟದ ಕೆಡಿಪಿ ಸಭೆ । ವಿವಿಧ ವಿಷಯಗಳ ಚರ್ಚೆ

## ಅಧಿಕಾರಿಗಳಿಗೆ ಮಾಹಿತಿ ಕೊರತೆ: ಶಾಸಕ ಸಿಮೆಂಟ್ ಮಂಜು ತರಾಟೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಸಕಲೇಶಪುರ: ತಮ್ಮ ವ್ಯಾಪ್ತಿಗೆ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರಿಸಲು ಏದುಸಿರು ಬಿಟ್ಟ ಅಧಿಕಾರಿಗಳಿಗೆ ಶಾಸಕ ಸಿಮೆಂಟ್ ಮಂಜು ತರಾಟೆಗೆ ತೆಗೆದುಕೊಂಡರು.

ತಾಲೂಕು ಮಟ್ಟದ ತ್ರೈ ಮಾಸಿಕ ಸಭೆಯಲ್ಲಿ ತಾಲೂಕು ಪಂಚಾಯಿತಿ ನಾಮನಿರ್ದೇಶಿತ ಸದಸ್ಯ ಹಾನುಬಾಳ್ ಬಾಸ್ಕರ್ ಮಾತನಾಡಿ, ಗ್ರಾಮದ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡ ದುಸ್ಥಿತಿಗೀಡಾಗಿದ್ದು ಅನಾಹುತ ಸಂಭವಿಸುವ ಮುನ್ನ ನೆಲಸಮಗೊಳಿಸಬೇಕಿದೆ ಎಂದರು. ಅದಕ್ಕೆ ಉತ್ತರಿಸುವಂತೆ ಶಾಸಕ ಸಿಮೆಂಟ್ ಮಂಜು ಜಿ.ಪಂ. ಎಇಇ ಲಖನ್ ಸಿಫಾನಿ ಅವರಿಗೆ ಸೂಚಿಸಿದರು. ಶಾಲಾ ಕಟ್ಟಡ ನೆಲಸಮಗೊಳಿಸುವ ಕೆಲಸ ಲೋಕಪಯೋಗಿ ಇಲಾಖೆಗೆ ಸೇರಿದ್ದು ಎಂದರು. ಈ ವೇಳೆ ಲೋಕಪಯೋಗಿ ಇಲಾಖೆ ಎಇಇ ಮುರುಗೇಶ್ ಶಾಲಾ ಕಟ್ಟಡ ನೆಲಸಮ ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದರು. ಅದಕ್ಕೆ ಸಿಟ್ಟಾದ ಶಾಸಕ ಇಲಾಖೆಯ ವ್ಯಾಪ್ತಿ ತಿಳಿದಿಲ್ಲವ ನಿಮಗೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ಅಧಿಕಾರಿ ಗಂಗಾಧರ್, ಶಾಲಾ ಕಟ್ಟಡ ನೆಲಸಮಗೊಳಿಸುವುದು ಸಂಬಂಧಪಟ್ಟ ಶಾಲಾ ಮಂಡಳಿ ಜವಾಬ್ದಾರಿ. ಶಾಲಾ ಗುಣಮಟ್ಟದ ಬಗ್ಗೆ ಜಿ.ಪಂ. ಇಂಜನಿಯರ್‌ಗಳಿಂದ ವರದಿ ತರಿಸಿಕೊಂಡು ಕಟ್ಟಡದಲ್ಲಿನ ಪರಿಕರಗಳನ್ನು ಹಾಜರುಗೊಳಿಸಿ ಈ ಹಣದಲ್ಲಿ ಶಾಲಾ ಕಟ್ಟಡಗಳನ್ನು ನೆಲಸಮಗೊಳಿಸಬೇಕು ಎಂಬ ಸ್ಪಷ್ಟನೆ ನೀಡಿದರು.

ಇನ್ನೂ ಜಿ.ಪಂ ಎಇಇ ಸಭೆಯಲ್ಲಿ ಮತ್ತೊಮ್ಮೆ ಇಲಾಖೆಯ ಬಗ್ಗೆ ತಮಗಿರುವ ಅಜ್ಞಾನ ಪ್ರದರ್ಶಿದ್ದು ನರೇಗಾ ಕೆಲಸಕ್ಕೆ ತಮ್ಮ ಇಲಾಖೆಗೆ ಮುಂಗಡ ಪಾವತಿಸಬೇಕು ಎಂದರು.

ನರೇಗಾ ಕೆಲಸಕ್ಕೆ ಮುಂಗಡ ಕಟ್ಟಬೇಕಿಲ್ಲರೀ ಎಂದು ಖಾರವಾಗಿಯೆ ತಾಪಂ ಇಒ ಗಂಗಾಧರ್ ಹೇಳಿದರು. ಮಧ್ಯ ಪ್ರವೇಶಿಸಿದ ಶಾಸಕ ಯಾಕರಿ ಸುಮ್ಮನೆ ಇಲ್ಲದ ಕಾರಣ ಹೇಳಿಕೊಂಡು ಅಭಿವೃದ್ಧಿ ಕೆಲಸಗಳನ್ನು ವಿಳಂಬ ಮಾಡುತ್ತಿರಿ ಮೊದಲು ತಮ್ಮ ಇಲಾಖೆಯ ನಿಯಮಗಳನ್ನು ತಿಳಿದುಕೊಳ್ಳಿ ಎಂದರು.

ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಮಷಿನ್ ದುರಸ್ಥಿತಿಗಿಡಾಗಿದೆ ಎಂದು ಕ್ರಾಫರ್ಡ್ ಆಸ್ಪತ್ರೆ ವೈದ್ಯಾಧಿಕಾರಿ ಡಾ. ಅರುಣ್ ಕುಮಾರ್ ಹೇಳಿದರು. ಈ ವೇಳೆ ಮಾತನಾಡಿದ ಶಾಸಕ, ಅಲ್ರೀ ರೇಡಿಯಾಲಜಿ ವೈದ್ಯರ ನೇಮಕವಾದ ನಂತರ ಯಂತ್ರ ಕೆಟ್ಟು ಹೋಗಿದೆ. ಖಾಸಗಿ ಲ್ಯಾಬ್‌ಗೆ ಕಳುಹಿಸುವ ಹುನ್ನಾರವೇ. ಸ್ಕ್ಯಾನಿಂಗ್ ಮೀಷನ್ ಆಸ್ಪತ್ರೆಗೆ ತಂದು 10 ವರ್ಷಗಳಾಗಿದೆ. ಅದರಲ್ಲಿ 10 ಸ್ಕ್ಯಾನಿಂಗ್ ಪರೀಕ್ಷೆ ಮಾಡಲಾಗಿಲ್ಲ. ಈಗ ದುರಸ್ಥಿಗೀಡಾಗಿದೆ ಎಂದರೆ ಹೇಗೆ ಎಂದರು.

ಅದಕ್ಕೆ ಉತ್ತರಿಸಿದ ವೈದ್ಯಾಧಿಕಾರಿ ಆಸ್ಪತ್ರೆಯಲ್ಲಿ ವಿದ್ಯುತ್ ಏರಿಳಿತಗಳಿವೆ. ಯಂತ್ರಗಳು ಹಾನಿಗೀಡಾಗಲು ಕಾರಣವಾಗಿದೆ ಎಂದರು.

ಈ ವೇಳೆ ಮಧ್ಯ ಪ್ರವೇಶಿಸಿದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಮುರುಳಿ ಮೋಹನ್, ಆಸ್ಪತ್ರೆಯಲ್ಲಿ ಖಾಸಗಿ ಅಂಬುಲೆನ್ಸ್ ಹಾವಳಿ ಅತಿಯಾಗಿದ್ದು ಜಿಲ್ಲಾಸ್ಪತ್ರೆಗೆ ಶಿಫಾರಸ್ಸು ಮಾಡುವ ರೋಗಿಗಳನ್ನು ಹಾಸನದ ಖಾಸಗಿ ಆಸ್ಪತ್ರೆಗೆ ಕೊಂಡೊಯ್ಯುವ ಮೂಲಕ ರೋಗಿಗಳ ಜೀವ ಹಿಂಡಲಾಗುತ್ತಿದೆ. ಆಸ್ಪತ್ರೆ ಎದುರಿನ ರಸ್ತೆಯಲ್ಲಿ ಅಂಬುಲೆನ್ಸ್ ಹಾವಳಿ ಹೆಚ್ಚಿರುವುದರಿಂದ ವಾಹನಗಳು ಸರಾಗವಾಗಿ ಸಂಚರಿಸಲು ಸಾಧ್ಯವಿಲ್ಲದಾಗಿದೆ. ಅಂಬುಲೆನ್ಸ್‌ಗೆ ಜಿಪಿಎಸ್ ಅಳವಡಿಸಬೇಕು ಹಾಗೂ ಆಸ್ಪತ್ರೆ ಮುಂಭಾಗ ಅಂಬುಲೆನ್ಸ್ ನಿಲುಗಡೆ ನಿಷೇಧಕ್ಕೆ ನಿರ್ಣಯ ಕೈಗೊಳ್ಳಬೇಕು ಎಂದರು.

ತಾಲೂಕಿನ ಸರ್ಕಾರಿ ಶಾಲೆಗಳ ಜಮೀನು ಸಂರಕ್ಷಣೆಗೆ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿದ್ದು ತಾಲೂಕಿನ 168 ಸರ್ಕಾರಿ ಶಾಲೆಗಳ ಪೈಕಿ 39 ಸರ್ಕಾರಿ ಶಾಲೆಗಳ ಜಮೀನು ಸಂರಕ್ಷಣೆ ಮಾಡಲಾಗಿದೆ. 78 ಶಾಲೆಗಳು ಸರ್ಕಾರಿ ಜಮೀನಿನಲ್ಲಿದ್ದರೆ ಬಾಕಿ ಉಳಿದಿರುವ ಶಾಲೆಗಳು ಖಾಸಗಿ ಜಮೀನಿನಲ್ಲಿದ್ದು ಖಾತೆ ಮಾಡಿಕೊಡುವ ವಿವರವನ್ನು ತಹಸೀಲ್ದಾರ್‌ಗೆ ಸಲ್ಲಿಸಿದ್ದೇವೆ ಎಂದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ತಹಸೀಲ್ದಾರ್ ಸುಪ್ರೀತಾ ಅವರಿಗೆ ಸೂಚನೆ ನೀಡಿ ಕ್ಷೇತ್ರ ಶಿಕ್ಷಣಾಧಿಕಾರಿ ಅವರನ್ನು ತಮ್ಮ ಕಚೇರಿಗೆ ಕರೆಸಿ ಚರ್ಚೆ ನಡೆಸಿ ಶೀಘ್ರವಾಗಿ ಸರ್ಕಾರಿ ಶಾಲೆಗಳ ಹೆಸರಿಗೆ ಪಹಣಿ ನೊಂದಾಯಿಸುವಂತೆ ಸೂಚಿಸಿದರು.



### ಅಧಿಕಾರಿಗಳು ತಬ್ಬಿಬ್ಬು

ಸಭೆಯು ಆರಂಭದಿಂದ ಅಂತ್ಯದವರಗೆ ಅನುಷ್ಠಾನ ಸಮಿತಿ ಅಧ್ಯಕ್ಷರು ಪ್ರತಿಯೊಂದು ಇಲಾಖೆಯ ವಿಚಾರದಲ್ಲೂ ಅಧಿಕಾರಿಗಳಿಂದ ಸ್ಪಷ್ಟನೆ ಬಯಸುತ್ತಿದ್ದಲ್ಲದೆ ಸಲಹೆಯನ್ನು ನೀಡುತ್ತಿದ್ದರು. ಇತ್ತ ಶಾಸಕರು ಸಹ ಸಮಸ್ಯೆಗಳ ಬಗ್ಗೆ ಪ್ರಶ್ನೆಗಳನ್ನೆತ್ತುದ್ದಲ್ಲದೆ, ಸಲಹೆ ನೀಡುತ್ತಿದ್ದರು. ಅದರಿಂದಾಗಿ ಅಧಿಕಾರಿಗಳು ಇಬ್ಬರಿಗೂ ಉತ್ತರ ನೀಡಬೇಕಾಗಿದ್ದಲ್ಲದೆ ಇಬ್ಬರಿಂದಲೂ ಸಲಹೆ ಸ್ವೀಕರಿಸಬೇಕಾದ ಅನಿವಾರ್ಯತೆಗೆ ಸಿಲುಕಿದರು.

### ರಸ್ತೆಗಳು ಹಾಳು

ತಾಲೂಕಿನ ಹೆತ್ತೂರು ಭಾಗದ ಹಲವೆಡೆ ಎತ್ತಿನಹೊಳೆ ಯೋಜನೆಯಿಂದ 5.5 ಮೀಟರ್ ಅಗಲದ ಅದ್ಬುತ ರಸ್ತೆಗಳು ನಿರ್ಮಾಣ ಮಾಡಲಾಗಿದೆ. ಆದರೆ, ಜೆಎಂಎಂ ಕಾಮಗಾರಿಯಿಂದ ಕಾಂಕ್ರಿಟ್ ರಸ್ತೆಗಳು ಕುಸಿಯುತ್ತಿದ್ದು ಹಲವೆಡೆ 5.5 ಮೀಟರ್‌ನಿಂದ 3.5ಕ್ಕೆ ಇಳಿದಿದೆ. ಅದಕ್ಕೆ ಕಡಿವಾಣ ಹಾಕಬೇಕು ಎಂದು ವೈ.ಪಿ.ರಾಜೇಗೌಡ ಆರೋಪಿಸಿದರು.

ಜಿಪಂ ಯೋಜನಾ ನಿರ್ದೇಶಕ ಸಮೀರ್ ಅಹಮ್ಮದ್, ತಹಸೀಲ್ದಾರ್ ಸುಪ್ರೀತಾ, ಇಒ ಗಂಗಾಧರ್ ಮುಂತಾದವರಿದ್ದರು.

# ಸಾಧಕರಿಗೆ ಅಡ್ಡಿಯಾಗದೆ ಪ್ರೋತ್ಸಾಹಿಸಿ: ಶೋಭಾ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಮನುಷ್ಯನ ಮಹತ್ತರ ಸಾಧನೆ ಹಿಂದೆ ಸಾವಿರಾರು ಸವಾಲುಗಳಿರುತ್ತವೆ, ಪ್ರತಿಭೆ ಮೂಲಕ ಏನನ್ನಾದರೂ ಸಾಧಿಸಲು ಪ್ರಯತ್ನಿಸುವವರಿಗೆ ಬೆಂಬಲ ನೀಡಬೇಕೆ ಹೊರತು ಅಡ್ಡಿಯಾಗಬಾರದು ಎಂದು ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ನಿರ್ದೇಶಕಿ ಜಿ.ಶೋಭಾ ಹೇಳಿದರು.

ಪಟ್ಟಣದ ಸರ್ಕಾರಿ ಮಹಿಳಾ ಗೃಹ ವಿಜ್ಞಾನ ಕಾಲೇಜಿನಲ್ಲಿ ಬುಧವಾರ 2025-26ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ, ರೇಂಜರ್ಸ್ ಹಾಗೂ ರೆಡ್ ಕ್ರಾಸ್ ಘಟಕ ಉದ್ಘಾಟಿಸಿ ಮಾತನಾಡಿ, ನಿಮ್ಮಲ್ಲಿರುವ ಸಾಮರ್ಥ್ಯ, ಸಾಧಿಸಬೇಕೆಂಬ ಛಲ, ಕಲಿಕೆಯಲ್ಲಿ ಶ್ರದ್ಧೆಯೂ ಯಾವ ಚೌಕಟ್ಟಿಗೆ ಒಳಪಡುವುದಿಲ್ಲ. ಕಲಿಯಬೇಕೆಂಬ ಆತ್ಮ ವಿಶ್ವಾಸ, ಕಲಿಕೆಯ ತುಡಿತ, ಅಧ್ಯಯನದಲ್ಲಿ ಶ್ರದ್ಧೆ, ಗುರಿ ಸಾಧನೆಯಲ್ಲಿ ಛಲದ ಜೊತೆಗೆ ಗುರುವಿನ ಮಾರ್ಗದರ್ಶನ ಇದ್ದರೆ ಸಾಧನೆಯ ಶಿಖಿರವೇರಲು ಸಾಧ್ಯವೆಂದು ಅಭಿಪ್ರಾಯಪಟ್ಟರು.

ಪ್ರಸ್ತುತ ದಿನಗಳಲಿ ಯುವಕರಿಗೆ ಕೆಲಸ ಸಿಗುತ್ತಿಲ್ಲವೆಂಬ ಮಾತು ವ್ಯಾಪಕವಾಗಿದೆ. ಆದರೆ ಕೌಶಲಗಳ ಕೊರತೆಯಿಂದಾಗಿ ಉದ್ಯೋಗ ದೊರೆಯುವುದು ಕಷ್ಟವಾಗಿದೆ. ಪದವಿ ಹಾಗೂ ಸ್ನಾತ್ತಕೋತ್ತರ ಶಿಕ್ಷಣ ಪಡೆಯುವ ಐದು ವರ್ಷದಲ್ಲಿ ದೊರೆಯುವ ಸದಾವಕಾಶ ಬಳಕೆ ಮಾಡಿಕೊಂಡು ಪದವಿ ಶಿಕ್ಷಣ ಪಡೆಯುವ ಸಂದರ್ಭದಲ್ಲಿ ಆನ್‌ಲೈನ್ ಕೌಶಲಾಧಾರಿತ ವ್ಯಾಸಂಗ ಮಾಡುವ ಅವಕಾಶವಿದೆ. ಶಿಕ್ಷಣ, ಪಠ್ಯೇತರ ಚಟುವಟಿಕೆಗಳ ಜೊತೆಗೆ ಈ ರೀತಿಯ ಕೌಶಲಾಧಾರಿತ ಶಿಕ್ಷಣವು ಕಲಿಕಾ ಸಾಮರ್ಥ್ಯ ಹೆಚ್ಚಿಸುತ್ತದೆ. ಇಂದಿನ ಸ್ಪರ್ಧಾತ್ಮಕ ಹಾಗೂ ಜಾಗತಿಕ ಮಟ್ಟದ ಹೋರಾಟದಲ್ಲಿ ನಿಮ್ಮ ಪ್ರೌಢಿಮೆ ಅನಾವರಣಕ್ಕೆ ಉತ್ತಮ ಅವಕಾಶ ಕಲ್ಪಿಸಲಿದೆ. ಐದು ವರ್ಷದಲ್ಲಿ ನೀವು ಕಲಿಕೆ, ಜ್ಞಾನಾರ್ಜನೆ ಮತ್ತು ದೊರೆತ ಸಮಯದ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಪ್ರಗತಿ ಸಾಧಿಸಿದಲ್ಲಿ ಮುಂದಿನ ಐವತ್ತು ವರ್ಷಗಳ ನಿಮ್ಮ ಭವಿಷ್ಯ ಇತರರಿಗೆ ಮಾದರಿಯಾಗುವ ಜೊತೆಗೆ ನಿಮ್ಮ ಶಾಲೆ, ಪೋಷಕರು ಹೆಮ್ಮೆ ಪಡುವಂತೆ ಮಾಡುತ್ತದೆ ಎಂದರು.

# ನ. 9ಕ್ಕೆ ಗಣಪತಿ ಮೂರ್ತಿ ವಿಸರ್ಜನಾ ಮೆರವಣಿಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ತಾಲ್ಲೂಕಿನ ಗಂಡಸಿ ಶ್ರೀ ಪ್ರತ್ಯಕ್ಷ ಗಣಪತಿ ವಿಸರ್ಜನಾ ಮಹೋತ್ಸವ ನ. 9ರ ಭಾನುವಾರ ನೆರವೇರಲಿದೆ.

75ನೇ ವರ್ಷದ ಅಮೃತ ಮಹೋತ್ಸವ ಹಾಗೂ ವಿಸರ್ಜನಾ ಕಾರ್ಯಕ್ರಮ ಅಂಗವಾಗಿ ವಿವಿಧ ಕಾರ್ಯಕ್ರಮ ಆಯೋಜಿಸಲಾಗಿದೆ. ಅಂದು ಸಂಜೆ 7 ಗಂಟೆಗೆ ವಿಸರ್ಜನಾ ಮೆರವಣಿಗೆ ಆರಂಭವಾಗಲಿದ್ದು, ಗಂಡಸಿ ಶ್ರೀ ಶಂಭುಲಿಂಗೇಶ್ವರಸ್ವಾಮಿ ಮಠದ ಶ್ರೀ ರೇವಣಸಿದ್ದೇಶ್ವರ ಸ್ವಾಮೀಜಿ, ನುಗ್ಗೆಹಳ್ಳಿ ಪುರವರ್ಗ ಮಠದ ಮಹೇಶ್ವರ ಸ್ವಾಮೀಜಿ, ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಜೆಡಿಎಸ್ ಮುಖಂಡ ಎನ್. ಆರ್. ಸಂತೋಷ್ ಅವರು ಮಹಾಮಂಗಳಾರತಿ ನೆರವೇರಿಸುವರು. ವಿದ್ಯುತ್ ದೀಪ ಮತ್ತು ಹೂವಿನಿಂದ ಅಲಂಕೃತಗೊಂಡ ದರ್ಬಾರ್ ಮಂಟಪದಲ್ಲಿ ಶ್ರೀ ಸ್ವಾಮಿ ಯವರನ್ನು ಕೂರಿಸಿ ಕೀಲು ಕುದುರೆ ನರ್ತನ, ಲಿಂಗದ ವೀರರ ಕುಣಿತ, ಡ್ರಮ್ ಸೆಟ್ ವಾದ್ಯ, 10 ಅಡಿ ಆಂಜನೇಯನ ನೃತ್ಯ, ಮಹಿಳಾ ವೀರಗಾಸೆ ನರ್ತನ, ಚಿಟ್ಟಿಮೇಳ, ನಾದಸ್ವರ ವಾದ್ಯ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಗುವುದು.

ರಾತ್ರಿ 8 ಗಂಟೆಗೆ ಶ್ರೀ ಆಂಜನೇಯಸ್ವಾಮಿ ದೇವಾಲಯದ ಬಳಿ ಕಾರ್ಯಕ್ರಮಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನ್ನ ದಾಸೋಹ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸೋಮವಾರ ಬೆಳಿಗ್ಗೆ 8 ಗಂಟೆಗೆ ಗಂಡಸಿ ದೊಡ್ಡ ಕೆರೆಯಲ್ಲಿ ಗಣಪತಿ ಮೂರ್ತಿ ವಿಸರ್ಜಿಸಲಾಗುವುದು.

# ಬಸ್ ಹತ್ತುವಾಗ ಚಿನ್ನದ ಸರ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ಬಸ್ ಹತ್ತುವಾಗ ನೂಕುನುಗ್ಗಲಿನಲ್ಲಿ ಮಹಿಳೆ ಕೊರಳಿಂದ 35 ಗ್ರಾಂ ತೂಕದ ಚಿನ್ನದ ಸರ ಎಗರಿಸಿರುವ ಘಟನೆ ತಾಲ್ಲೂಕಿನ ಕೇರಳಾಪುರದಲ್ಲಿ ನಡೆದಿದೆ. ಮೈಸೂರು ಜಿಲ್ಲೆ ಕುಪ್ಪೆ ಗ್ರಾಮದ ಮೀನಾ ಎಂಬುವವರ ಸರ ಕಳುವಾಗಿದೆ. ನ. 2 ರಂದು ಮದುವೆ ನಿಮಿತ್ತ ಕೇರಳಾಪುರಕ್ಕೆ ಬಂದಿದ್ದ ಅವರು ವಾಪಸ್ ಊರಿಗೆ ಹೋಗುತ್ತಿದ್ದರು. ಬಸ್ ಅರ್ಧ ಕಿ.ಮೀ. ದೂರ ಹೋಗುತ್ತಿದ್ದಂತೆ ನೋಡಿಕೊಂಡಾಗ ಸರ ಇಲ್ಲದಿರುವುದು ಗೊತ್ತಾಗಿದೆ. ನೂಕುನುಗ್ಗಲಿನಲ್ಲಿ ಕಿಡಿಗೇಡಿಗಳು ಸರ ದೋಚಿದ್ದಾರೆ. ಅದರ ಒಟ್ಟು ಬೆಲೆ 4 ಲಕ್ಷ ರೂ. ಆಗಿದೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಲ್ಮಿಡಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ತಡೆಗೆ ಆಗ್ರಹ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಕನ್ನಡದ ಪ್ರಥಮ ಶಿಲಾ ಶಾಸನ ದೊರೆತ ಹಲ್ಮಿಡಿ ಗ್ರಾಮದ ಕೆಲ ಮನೆಗಳಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದ್ದು ಅದಕ್ಕೆ ಕಡಿವಾಣ ಹಾಕಬೇಕೆಂದು ಆಗ್ರಹಿಸಿ ಗಾಮಸ್ಥರು ಅಬಕಾರಿ ನಿರೀಕ್ಷಕಿ ಅಪೂರ್ವ ಅವರಿಗೆ ಮನವಿ ಸಲ್ಲಿಸಿದರು.

ಗ್ರಾಮದ ನೇತ್ರಾವತಿ ಮಾತನಾಡಿ, ಕನ್ನಡಕ್ಕೆ ಪ್ರಥಮ ಶಿಲಾ ಶಾಸನ ಕೊಟ್ಟಿರುವ ಹಲ್ಮಿಡಿ ಗ್ರಾಮಕ್ಕೆ ತನ್ನದೇಯಾದ ಸ್ಥಾನಮಾನವಿದೆ. ರಾಜ್ಯದ ಜನರು ಗ್ರಾಮದ ಕುರಿತು ಅತೀವ ಪ್ರೀತಿ ಹೊಂದಿದ್ದಾರೆ. ಈ ಊರು ನಾಡಿಗೆ ಮಾದರಿಯಾಗಿರಬೇಕು. ಗ್ರಾಮದ ಕೆಲವು ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದರಿಂದ ಶಾಂತಿಗೆ ಧಕ್ಕೆ ಬಂದಿದೆ. ಯುವಕರು, ವಯಸ್ಕರು ದಿನಪೂರ್ತಿ ನಶೆಯಲ್ಲಿರುತ್ತಾರೆ. ಮದ್ಯದ ಅಮಲಿನಲ್ಲಿ ಅಡ್ಡಾದಿಡ್ಡಿ ಬೈಕ್ ಓಡಿಸುವುದು, ಅಪಘಾತ, ಗಲಾಟೆ ಮಾಡುತ್ತಾರೆ. ಅದರಿಂದ ನೆಮ್ಮದಿ ಹಾಳಾಗಿದೆ.

ಮಕ್ಕಳು, ಮಹಿಳೆಯರ ಮನೆಯಿಂದ ಹೊರಬರಲು ಹಿಂದೇಟು ಹಾಕುವಂತಾಗಿದೆ ಎಂದರು.

ಹಲ್ಮಿಡಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಮತ್ತು ಹಿಂದುಳಿದ ವರ್ಗದ ಕೂಲಿ ಕಾರ್ಮಿಕರೇ ಹೆಚ್ಚಿದ್ದಾರೆ. ಗ್ರಾಮದಲ್ಲಿ ನಿತ್ಯ ಬೆಳ್ಳಂ ಬೆಳಿಗ್ಗೆಯೇ ಆರೇಳು ಮನೆಗಳಲ್ಲಿ ಮದ್ಯವನ್ನು ರಾಜಾರೋಷವಾಗಿ ಮಾರಾಟ ಮಾಡುತ್ತಿರುವುದರಿಂದ ಕುಡಿದವರು ಮನೆಗೆ ಬಂದು ಹೆಂಡತಿ ಮಕ್ಕಳೊಂದಿಗೆ ಜಗಳವಾಡಿ ಕಿರುಕುಳ ನೀಡುತ್ತಾರೆ. ಮಕ್ಕಳು ಶಾಲೆಗೆ ಹೋಗದ ಪರಿಸ್ಥಿತಿ ನಿರ್ಮಾಣವಾಗಿದೆ. ರಾತ್ರಿ ಸಮಯದಲ್ಲಿ ಮಕ್ಕಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿದೆ. ಕನ್ನಡ ಶಿಲಾಶಾಸನ ನೋಡಲು ಪ್ರವಾಸಿಗರು ಬಂದರೆ ಅವರ ವಾಹನ ತಡೆದು ಹಣ ವಸೂಲಿ ಮಾಡುವುದಲ್ಲದೆ ಮಹಿಳೆಯರಿಗೆ ಹಿಂದೆ ನೀಡುವುದರಿಂದ ಹಲ್ಮಿಡಿ ಗ್ರಾಮಕ್ಕೆ ಕೆಟ್ಟ ಹೆಸರು ಬರುತ್ತಿದೆ. ಎಷ್ಟೋ ಕುಟುಂಬಗಳು ಬೀದಿಗೆ ಬಿದ್ದಿವೆ. ಈ ವಿಚಾರವಾಗಿ ಹಲವಾರು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಪ್ರಯೋಜನವಾಗಿಲ್ಲ ಎಂದರು.

ಅಬಕಾರಿ ನಿರೀಕ್ಷಕಿ ಅಪೂರ್ವ ಮಾತನಾಡಿ, ಅಕ್ರಮ ಮದ್ಯ ಮಾರಾಟದ ಬಗ್ಗೆ ಆರೋಪಗಳು ಕೇಳಿ ಬಂದಿದ್ದು, ಶೀಘ್ರದಲ್ಲೇ ಹಲ್ಮಿಡಿ ಗ್ರಾಮದಲ್ಲಿ ಮದ್ಯ ಮಾರಾಟ ಮಾಡುವವರ ವಿರುದ್ಧ ಕ್ರಮ ದಾಖಲಿಸಲಾಗುವುದೆಂದು ಭರವಸೆ ನೀಡಿದರು.

ಹಲ್ಮಿಡಿ ಗ್ರಾಮಸ್ಥರಾದ ಮಹೇಶ್, ಕುಮಾರ್, ಅಕ್ಷಯ್, ಲಕ್ಷ್ಮಣ್, ಧನಲಕ್ಷ್ಮಿ, ಸುಶೀಲಮ್ಮ, ವೇದಾವತಿ, ದಾನಮ್ಮ, ಜಯಮ್ಮ, ಸುಧಾ ಇತರರಿದ್ದರು.

# ಡಿ. 13ಕ್ಕೆ ಹನುಮ ಜಯಂತಿ ಪೂರ್ವಭಾವಿ ಸಭೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಪಟ್ಟಣದಲ್ಲಿ ಡಿ. 13 ರಂದು ಹಮ್ಮಿಕೊಂಡಿರುವ 13ನೇ ವರ್ಷದ ಹನುಮ ಜಯಂತಿಯನ್ನು ಯಾವ ಗೊಂದಲವಿಲ್ಲದೆ ಶಾಂತಿಯುತವಾಗಿ ಆಚರಿಸಬೇಕೆಂದು ಅರಸೀಕೆರೆ ಡಿವೈಎಸ್‌ಪಿ ಗೋಪಿ ತಿಳಿಸಿದರು.

ಪಟ್ಟಣದ ಮಂಜುನಾಥ ಕಲ್ಯಾಣ ಮಂಟಪದಲ್ಲಿ ಹನುಮ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಕಳೆದ 12 ವರ್ಷಗಳಿಂದ ಯಾ ಗೊಂದಲಕ್ಕೆ ಅವಕಾಶ ನೀಡದೆ ಹನುಮ ಜಯಂತಿಯನ್ನು ಅರ್ಥಪೂರ್ಣವಾಗಿ ಶಾಂತಿಯಿಂದ ಆಚರಿಸಿಕೊಂಡು ಬರಲಾಗುತ್ತಿದೆ. ಅದೇ ರೀತಿ ಈ ಬಾರಿಯೂ ಸಾವಿರಾರು ಭಕ್ತರು ಸೇರುವುದರಿಂದ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಎಲ್ಲರ ಸಹಕಾರ ಬೇಕು. ಪೊಲೀಸ್ ಇಲಾಖೆಯ ಹಲವು ಕಾನೂನು ಚೌಕಟ್ಟುಗಳಿದ್ದು ಅವುಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಪಟ್ಟಣದಲ್ಲಿ ವಾಹನ ದಟ್ಟಣೆ ಉಂಟಾಗುತ್ತದೆ. ಆದ್ದರಿಂದ ಜಯಂತಿ ಆಚರಣಾ ಸಮಿತಿಯವರೇ ಸ್ವಯಂ ಸೇವಕರನ್ನು ನಿಯೋಜಿಸಿ ವ್ಯವಸ್ಥೆ ಕಲ್ಪಿಸಬೇಕು. ನಿಗದಿತ ಸಮಯಕ್ಕೆ ಉತ್ಸವ ಪ್ರಾರಂಭಗೊಂಡು ಮುಕ್ತಾಯವಾಗಬೇಕು. ಅದರಲ್ಲಿ ಏನೇ ತೊಂದರೆಯಾದರು ಸಮಿತಿಯವರು ಹೊಣೆಗಾರರಾಗುತ್ತಾರೆ. ಉತ್ಸವ ನಡೆಯುವ ದಾರಿಯಲ್ಲಿ ಕಡ್ಡಾಯವಾಗಿ ಡ್ರೋನ್ ಕ್ಯಾಮರಾ ಹಾಗು ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗುವುದು ಎಂದರು.

ಪೊಲೀಸ್ ಇನ್ಸ್‌ಪೆಕ್ಟರ್ ರೇವಣ್ಣ ಮಾತನಾಡಿ, ಹನುಮ ಜಯಂತಿ ಉತ್ಸವದ ಮೆರವಣಿಗೆಯನ್ನು ಬೇಗ ಪ್ರಾರಂಭಿಸಬೇಕು. ಶೋಭಾಯಾತ್ರೆ ಸಂದರ್ಭ ದೊಡ್ಡ ವಾಹನಗಳಿಗೆ ಅವಕಾಶ ಇರುವುದಿಲ್ಲ. ಆಯೋಜಕರು ತಮ್ಮ ವಾಹನಗಳನ್ನು ಜೂನಿಯರ್ ಕಾಲೇಜು ಮೈದಾನದಲ್ಲಿ ನಿಲ್ಲಿಸಬೇಕು. ಮೆರವಣಿಗೆ ಹೊಳೆಬೀದಿಯಲ್ಲಿ ತೆರಳುವಾಗ ಡಿಜೆ ಶಬ್ದ ಕಡಿಮೆ ಮಾಡಬೇಕು. ಅಂದು ಮದ್ಯದಂಗಡಿಯನ್ನು ಸಂಪೂರ್ಣ ಬಂದ್ ಮಾಡಿಸಲಾಗುವುದು ಎಂದರು.

ಹನುಮ ಜಯಂತಿ ಆಚರಣಾ ಸಮಿತಿ ಮುಖಂಡರಾದ ಮೋಹನ್ ಹಾಗೂ ಸಂತೋಷ್ ಮಾತನಾಡಿ, ಹನುಮ ಜಯಂತಿಗೆ ಜಾತಿ ಮತ ಭೇದವಿಲ್ಲದೆ ಸಹಸ್ರಾರು ಜನರು ಪಾಲ್ಗೊಳ್ಳುತ್ತಾರೆ. ವರ್ತಕರು ಮಧ್ಯಾಹ್ನ ನಂತರ ಅಂಗಡಿ ಮುಂಗಟ್ಟು ಬಂದ್ ಮಾಡಿ ಮೆರವಣಿಗೆಯಲ್ಲಿ ಭಾಗವಹಿಸಬೇಕು. ಸಮಿತಿಯಿಂದ ಪೊಲೀಸ್ ಇಲಾಖೆಗೆ ಸಂಪೂರ್ಣ ಸಹಕಾರ ನೀಡುತ್ತೇವೆ. ಶೋಭಾಯಾತ್ರೆ ಮಧ್ಯಾಹ್ನ 1 ಗಂಟೆಗೆ ಪ್ರಾರಂಭವಾಗಲಿದ್ದು ದೇಗುಲ ದ್ವಾರದ ಬಾಗಿಲ ಬಳಿ ಹಾರಗಳನ್ನು ತಂದು ಅರ್ಪಿಸಲು ಸೂಚನೆ ನೀಡಲಾಗಿದೆ ಎಂದರು.

ಸಭೆಯಲ್ಲಿ ಪಿಎಸ್ಐ ಶಿವನಗೌಡ ಜಿ.ಪಾಟೀಲ್, ಸಮಿತಿ ಸದಸ್ಯರು ಹಾಗೂ ಹನುಮ ಭಕ್ತರು, ವಿವಿಧ ಸಂಘ ಸಂಸ್ಥೆ ಪದಾಧಿಕಾರಿಗಳು ಹಾಜರಿದ್ದರು.

# ಇತಿಹಾಸದಲ್ಲಿ ಈ ದಿನ

## ನವೆಂಬರ್-07

1916: ಅಮೆರಿಕದ ಮಾಂಟಾನಾ ರಾಜ್ಯದ ಜೆನೆಟ್ ರ್ಯಾಂಕಿನ್ ಅಮೆರಿಕ ಕಾಂಗ್ರೆಸ್‌ಗೆ ಆಯ್ಕೆಯಾದ ಮೊದಲ ಮಹಿಳೆ.

1917: ರಷ್ಯಾದಲ್ಲಿ ನಡೆದ ಅಕ್ಟೋಬರ್ ಕ್ರಾಂತಿಯಿಂದ ವ್ಲಾಡಿಮಿರ್ ಲೆನಿನ್ ಅವರ ನೇತೃತ್ವದ ಬೊಲ್ಶೆವಿಕ್ ಪಕ್ಷ ಅಧಿಕಾರಕ್ಕೇರಿತು.

1940: ಅಮೆರಿಕದ ವಾಷಿಂಗ್ಟನ್ ರಾಜ್ಯದ ಟಕೋಮಾ ನ್ಯಾರೋಸ್ ಸೇತುವೆ ಬಿರುಗಾಳಿಯಿಂದ ಕುಸಿದು ಬಿದ್ದಿತು.

1975: ಬಾಂಗ್ಲಾದೇಶದಲ್ಲಿ ಸೇನಾ ಕ್ರಾಂತಿ ಸಂಭವಿಸಿ ಸರ್ಕಾರ ಬದಲಾಯಿತು.

### ಜನನ

1867: ಮೇರಿ ಕ್ಯೂರಿ ಖ್ಯಾತ ವಿಜ್ಞಾನಿ, ನೊಬೆಲ್ ಬಹುಮಾನ ಪಡೆದ ಮೊದಲ ಮಹಿಳೆ

1888: ಸರ್ ಸಿ.ವಿ. ರಾಮನ್ ಭಾರತದ ಪ್ರಖ್ಯಾತ ಭೌತಶಾಸ್ತ್ರಜ್ಞ ಹಾಗೂ ನೊಬೆಲ್ ಪ್ರಶಸ್ತಿ ವಿಜೇತರು

1913: ಅಲ್ಬರ್ಟ್ ಕಮ್ಯೂ ಫ್ರೆಂಚ್ ಸಾಹಿತ್ಯದ ಖ್ಯಾತ ಕಾದಂಬರಿಗಾರ ಹಾಗೂ ತತ್ವಜ್ಞ

1943: ಜೋನಿ ಮಿಚೆಲ್ ಪ್ರಸಿದ್ಧ ಕೆನಡಿಯನ್ ಗಾಯಕಿ ಮತ್ತು ಗೀತ ರಚಯಿತೆ

### ಮರಣ

1913: ಅಲ್ಫ್ರೆಡ್ ರಸ್ಸೆಲ್ ವಾಲೆಸ್ ಚಾರ್ಲ್ಸ್ ಡಾರ್ವಿನ್ ಅವರೊಂದಿಗೆ 'ಪ್ರಾಕೃತಿಕ ಆಯ್ಕೆ' ತತ್ವದ ಸಹ ಆವಿಷ್ಕಾರಕ

1950: ಕ್ಲಿಮೆಂಟ್ ಸ್ಟ್ಯಾಟಿನ್ ಬ್ರಿಟನ್‌ನ ಮಾಜಿ ಪ್ರಧಾನಮಂತ್ರಿ

1996: ಝೂಂ ಪೌಲ್ ಸಾತ್ರೆರ್, ಫ್ರೆಂಚ್ ತತ್ವಜ್ಞ ಹಾಗೂ ಸಾಹಿತಿ

# ಬಡವರಿಗೆ ತವರು ಟ್ರಸ್ಟ್‌ನಿಂದ ದಾಸೋಹ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್


ಹಾಸನ: ಕೂಲಿ ಕಾರ್ಮಿಕರು, ನಿರ್ಗತಿಕರು, ಬಡವರಿಗೆ ಅನುಕೂಲವಾಗಲೆಂಬ ಉದ್ದೇಶದಿಂದ ನಗರದ ತವರು ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್‌ನಿಂದ ಪ್ರತಿ ಗುರುವಾರ ನಾರಾಯಣ ಸೇವೆ ಹೆಸರಿನಲ್ಲಿ ದಾಸೋಹ ಆರಂಭಿಸಲಾಗಿದೆ.

ಬೆಳಿಗ್ಗೆ 8 ರಿಂದ 11 ಗಂಟೆ ವರೆಗೆ ನಗರದ ಎನ್.ಆರ್. ವೃತ್ತದಲ್ಲಿ ಉಪಾಹಾರ ವಿತರಿಸಲಾಯಿತು.

ತವರು ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ಡಾ. ಪಾಲಾಕ್ಷ ಮಾತನಾಡಿ, ಹಸಿವಿನಿಂದ ನರಳುವವರ ಹೊಟ್ಟೆ ತುಂಬಿಸುವುದು. ಮಾನವ ಸೇವೆಯೇ ದೇವರ ಸೇವೆ ಎಂಬ ಧ್ಯೇಯದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. ಮುಂದಿನ ದಿನಗಳಲ್ಲಿ ಹೆಚ್ಚಿನ ಸ್ಥಳಗಳಲ್ಲಿ ಉಪಾಹಾರ ವಿತರಣೆ ಮಾಡುವ ಯೋಜನೆಯೂ ಇದೆ. ಹಸಿದವನಿಗೆ ಅನ್ನ ನೀಡುವುದು ಅತಿದೊಡ್ಡ ಪೂಜೆ ಎಂಬ ಮಾತನ್ನು ಜೀವನದ ಧ್ಯೇಯವಾಗಿ ಅಳವಡಿಸಿಕೊಳ್ಳಲಾಗಿದೆ. ನಿಸ್ವಾರ್ಥ ಸೇವೆಯ ಮೂಲಕ ಹಾಸನದಲ್ಲಿ ಸಾಮಾಜಿಕ ಸ್ಪಂದನೆಯ ಹೊಸ ಸಂಸ್ಕೃತಿ ಬೆಳೆಸುತ್ತಿದೆ ಎಂದರು. ತವರು ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್‌ನ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ಸೂಚಿಸಿದರು.

# ದತ್ತ ಜಯಂತಿ: ನ.13ಕ್ಕೆ ಪೂರ್ವಭಾವಿ ಸಭೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಸಕಲೇಶಪುರ: ದತ್ತ ಜಯಂತಿ ಯಶಸ್ವಿಯಾಗಿ ನಡೆಸಲು ಅಗತ್ಯವಾದ ಯೋಜನೆ ಹಾಗೂ ಸಿದ್ಧತೆ ಕೈಗೊಳ್ಳುವ ಸಲುವಾಗಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ವಿಶ್ವ ಹಿಂದು ಪರಿಷತ್ ಹಾಗೂ ಭಜರಂಗದಳದ ಜಿಲ್ಲಾ ಕಾರ್ಯದರ್ಶಿ ಹರೀಶ್ ಕರಡಿಗಾಲ ಕೋರಿದರು.

ಪಟ್ಟಣದ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ತಾಲ್ಲೂಕಿನಲ್ಲಿಯೇ ಹಲವು ದಶಕಗಳಿಂದ ದತ್ತ ಪೀಠ ಹಾಗೂ ದತ್ತ ಪಾದುಕೆಯ ದರ್ಶನ ಕಾರ್ಯಕ್ರಮದೊಂದಿಗೆ ದತ್ತ ಜಯಂತಿ ಉತ್ಸವವನ್ನು ಭವ್ಯವಾಗಿ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

ಈ ಬಾರಿಯ ಜಯಂತಿಯನ್ನು ಅದ್ದೂರಿಯಾಗಿ ಆಚರಿಸುವ ಹಿನ್ನೆಲೆಯಲ್ಲಿ ನ. 13ರ ಗುರುವಾರ ಲಯನ್ಸ್ ಸಭಾಂಗಣದಲ್ಲಿ ಕಾರ್ಯಕರ್ತರ ಸಭೆ ಮತ್ತು ಸಮಾವೇಶ ನಡೆಯಲಿದೆ. ನ. 26ರಂದು ಗುರುವಾರ ಕಾರ್ಯಕರ್ತರ ಉಪಸ್ಥಿತಿಯಲ್ಲಿ ದತ್ತಮಾಲಾ ಧಾರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಡಿ. 7ರಂದು ಸಕಲೇಶಪುರ ನಗರದಲ್ಲಿ ಭವ್ಯ ಶೋಭಾಯಾತ್ರೆ ಹಾಗೂ ಭಕ್ತಿ ಸಂಕೇತನ ಯಾತ್ರೆ ನಡೆಯಲಿದೆ ಎಂದು ತಿಳಿಸಿದರು.

ಡಿ. 14ರಂದು ದತ್ತ ಜಯಂತಿ ಹಾಗೂ ದತ್ತಪಾದುಕೆಯ ದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಸಕಲ ಹಿಂದೂ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂಬ ಉದ್ದೇಶದಿಂದ ವಿಶ್ವ ಹಿಂದು ಪರಿಷತ್ ಹಾಗೂ ಭಜರಂಗದಳದ ವತಿಯಿಂದ ಪೂರ್ವಭಾವಿ ಸಭೆ ಕರೆಯಲಾಗಿದೆ. ಈ ಸಭೆಗೆ ಸಮಸ್ತ ಹಿಂದೂ ಬಾಂಧವರು ಪಾಲ್ಗೊಳ್ಳಬೇಕೆಂದು ಅವರು ಮನವಿ ಮಾಡಿದರು. ಭಜರಂಗದಳದ ತಾಲೂಕು ಸಂಯೋಜಕ ವಿಷ್ಣು ಮಾತನಾಡಿ, ದತ್ತ ಪೀಠವು ಕರ್ನಾಟಕದ ಅಯೋಧ್ಯೆಯಂತೆಯೇ ಪವಿತ್ರ ಸ್ಥಳವಾಗಿದ್ದು, ದತ್ತಪೀಠದ ಮುಕ್ತಿ ಹೋರಾಟವನ್ನು ವಿಶ್ವ ಹಿಂದು ಪರಿಷತ್ ಹಾಗೂ ಭಜರಂಗದಳವು ದಶಕಗಳಿಂದ ಮುಂದುವರಿಸುತ್ತಿದೆ ಎಂದರು. ಪ್ರತಿವರ್ಷದಂತೆ ಈ ವರ್ಷವೂ ದತ್ತಮಾಲಾ ಧಾರಣೆ ಮತ್ತು ದತ್ತಪಾದುಕೆಯ ದರ್ಶನ ಕಾರ್ಯಕ್ರಮ ನಡೆಯಲಿದ್ದು, ಕಳೆದ ಬಾರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಉದ್ದೇಶದಿಂದ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ತಾಲೂಕಿನ ಹಿಂದು ಬಂಧುಗಳು ಒಗ್ಗೂಡಿ ಶೋಭಾಯಾತ್ರೆ ಹಾಗೂ ದತ್ತಪಾದುಕೆಯ ದರ್ಶನದ ಮೂಲಕ ದತ್ತಪೀಠದ ಬಲ ಮತ್ತು ಭಕ್ತಿ ಶಕ್ತಿ ಪ್ರದರ್ಶಿಸಬೇಕೆಂದು ಅವರು ಮನವಿ ಮಾಡಿದರು.

ವಿಶ್ವ ಹಿಂದು ಪರಿಷತ್ ಹಾಗೂ ಭಜರಂಗದಳದ ತಾಲೂಕು ಅಧ್ಯಕ್ಷ ಬಾಲಕೃಷ್ಣ, ಮುಖಂಡರಾದ ಎಚ್. ಎಂ.ಸುರೇಶ್, ವಿಜಯ್ ಕುಮಾರ್, ರಾಘು ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248